ಕಳುಹಿಸಲಾಗಿದೆ. ವಿವರಿಸಲಾಗಿರುವಂತೆ ಪ್ರಕ್ರಿಯೆಗಳು ವಿವಿಧ ಹಂತಗಳಲ್ಲಿ ಜಾರಿಯಲ್ಲಿದ್ದು, ಪ್ರಗತಿಯಲ್ಲಿರುತ್ತವೆ.

27 ಶ್ರೀ ವಸಂತಬಂಗೇರ. ಕೆ (ಬೆಳ್ತಂಗಡಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿ ಎಷ್ಟು ಹೆಕ್ಟೇರ್ ಡಿ.ಸಿ. ಮನ್ನಾ ಭೂಮಿ ಇದೆ;

ಆ) ಸದರಿ ಸ್ಥಳವನ್ನು ಅರಣ್ಯ ಇಲಾಖೆಯವರು ಒತ್ತುವರಿ ಮಾಡಿ ಗಿಡ ನೆಟ್ಟು ಮರ ಬೆಳೆಸಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ;

ಇ) ಬಂದಿದ್ದಲ್ಲಿ, ತೆರವಿಗೆ ಯಾವ ಕ್ರಮ ವಹಿಸಲಾಗುವುದು;

ಈ) ಡಿ.ಸಿ. ಮನ್ನಾ ಭೂಮಿಯನ್ನು ಪಡೆಯಲು ನೀಡಲಾದ ಅರ್ಜಿಗಳ ಸಂಖ್ಯೆ ಎಷ್ಟು?

ಶ್ರೀ ಜೆ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಒಟ್ಟು 1193.02 ಹೆಕ್ಟೇರ್.

ಆ) ಹೌದು.

ಇ) ಅತಿಕ್ರಮಣ ತೆರವಿಗೆ ಜಿಲ್ಲಾಧಿಕಾರಿಗಳು ಈಗಾಗಲೇ ಸಂಬಂಧಿಸಿದ ವಲಯ ಅರಣ್ಯಾಧಿಕಾರಿಗೆ ನೋಟೀಸು ನೀಡಿರುತ್ತಾರೆ.

ಈ) 27 ಅರ್ಜಿಗಳು.

326 ಶ್ರೀ ಹೆಚ್.ಕೆ.ಕುಮಾರಸ್ವಾಮಿ : ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಸನ ಜಿಲ್ಲೆ ಸಕಲೇಶಪುರ ಕ್ಷೇತ್ರದ ಸಕಲೇಶ್ವರ ಮತ್ತು ಆಲೂರು ತಾಲ್ಲೂಕುಗಳಲ್ಲಿ 17 ಹಳ್ಳಿಗಳು ಹೇಮಾವತಿ ಜಲಾಶಯ ಹಿನ್ನೀರಿನಿಂದ ಶೀತಪೀಡಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಇವುಗಳನ್ನು ಸ್ಥಳಾಂತರಿಸಲು ಮತ್ತು ಪುನರ್ವಸತಿ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಬಸವರಾಜ ಬೊಮ್ಮಾಯಿ (ಜಲ ಸಂಪನ್ಮೂಲ ಸಚಿವರು) :

ಅ) ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಈ 17 ಗ್ರಾಮಗಳ ಪ್ರಸ್ತಾವನೆಯನ್ನು ಹೇಮಾವತಿ ಮತ್ತು ಯಗಚಿ ಯೋಜನೆಗಳ ಅಡಿಯಲ್ಲಿ ಶೀತಪೀಡಿತವಾಗಿರುವ ಗ್ರಾಮಗಳನ್ನು

ಗುರುತಿಸಿ ಸ್ಥಳಾಂತರಿಸಲು ಶಿಫಾರಸ್ಸು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಕಂಇ 215 ಆರ್‌ಇಹೆಚ್ 2008, ದಿನಾಂಕ: 11–12–2008, ರಂತೆ ಪ್ರಾದೇಶಿಕ ಆಯುಕ್ತರು, ಮೈಸೂರು, ಇವರ ಅಧ್ಯಕ್ಷತೆಯಲ್ಲಿ ರಚಿತವಾದ ಉನ್ನತಮಟ್ಟದ ಸಮಿತಿಯ ಮುಂದೆ ಮಂಡಿಸಿ, ಸಮಿತಿಯ ಶಿಫಾರಸ್ಸಿನ ನಂತರ ಕ್ರಮ ಕೈಗೊಳ್ಳಲಾಗುವುದು.

306 ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ : ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿಜಾಪುರ ಜಿಲ್ಲೆಯಲ್ಲಿ ಎಷ್ಟು ಕಿ.ಮೀಟರ್ ಡೋಣಿ ನದಿ ಹರಿದಿದೆ ;

ಆ) ಈ ಡೋಣಿ ನದಿಯು ಮಳೆಗಾಲದಲ್ಲಿ ಉಕ್ಕಿ ಹರಿದು ಪಕ್ಕದ ಜಮೀನುಗಳಲ್ಲಿ ಹರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಇದರ ಪರಿಹಾರಕ್ಕೆ ಸರ್ಕಾರದ ಯೋಜನೆ ಏನು; ಮತ್ತು ಯಾವಾಗ ಪ್ರಾರಂಭ ಮಾಡಲಾಗುವುದು?

ಶ್ರೀ ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) :

ಅ) ವಿಜಾಪುರ ಜಿಲ್ಲೆಯಲ್ಲಿ ಡೋಣಿ ನದಿಯು ಸುಮಾರು 158 ಕಿ.ಮೀ.ನಷ್ಟು ಉದ್ದಕ್ಕೆ ಹರಿದಿದೆ.

ಆ) ಬಂದಿದೆ.

ಇ) ಡೋ ನದಿಯಲ್ಲಿ ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ ಹಾಗೂ ಹೂಳೆತ್ತುವುದಕ್ಕಾಗಿ ಕೇಂದ್ರ ಸರ್ಕಾರದ ಭೂ ಸಂಪನ್ಮೂಲ ಇಲಾಖೆಯು ಕೃಷಿ ವಿಶ್ವವಿದ್ಯಾಲಯ, ಧಾರವಾಡದ ಮೂಲಕ ರೂ.4,82,35,300.00 ಗಳ ಅಂದಾಜು ಮೊತ್ತದಲ್ಲಿ ಮೂರು ವರ್ಷಗಳ ಅವಧಿಯೊಳಗೆ ಅನುಷ್ಠಾನಗೊಳಿಸಲು ಅನುಮೋದನೆ ನೀಡಿರುವ ಪೈಲೆಟ್ ಯೋಜನೆ ಇರುತ್ತದೆ.

ಈ ಯೋಜನೆಯನ್ನು ಸಣ್ಣ ನೀರಾವರಿ ಇಲಾಖೆಯಿಂದ ಶೀಘ್ರವಾಗಿ ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.